**ದಿನಾಂಕಃ 26.11.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಅಪಘಾತಕ್ಕೆ ಸಂಬಂಧಿಸಿದಂತೆ ತಿಪಟೂರಿನ ನ್ಯಾಯಾಲಯದಲ್ಲಿ ಮತ್ತೊಂದು ಅರ್ಜಿ ಸಲ್ಲಿಸಿದ್ದೇವೆ ಎಂದರೆ ಸರಿಯಲ್ಲ. ನನ್ನ ಹೆಸರಿನಲ್ಲಿ ಚುನಾವಣಾ ಗುರುತಿನ ಚೀಟಿ ಮತ್ತು ಆಧಾರ್ ಕಾರ್ಡ್ ಇರುತ್ತದೆ. ನಾನು ಗುರುಮೂರ್ತಿರವರನ್ನು ವಿವಾಹ ಆದ ಬಗ್ಗೆ ದಾಖಲೆ ಇದ್ದು, ಅದನ್ನು ಹಾಜರುಪಡಿಸಲು ತೊಂದರೆ ಇಲ್ಲ. ದಿನಾಂಕ 13.05.2023ರಂದು ಸಾಗರ್ ಎಂಬುವವರು ನನ್ನೊಂದಿಗೆ ವಾಸ ಇರಲಿಲ್ಲ. ಸಾಗರ್ ಗಂನ್ಸಿ ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದನು. ಸದರಿ ಶಾಲಾ ದಾಖಲಾತಿಗಳನ್ನು ಹಾಜರುಪಡಿಸಲು ತೊಂದರೆ ಇಲ್ಲ.

ಮೃತ ದೇಹವನ್ನು ಠಾಣೆಯಿಂದ ನಾವು ಪಡೆದಿದ್ದು, ಆ ಬಗ್ಗೆ ದಾಖಲಾತಿಗಳು ಇವೆ, ಅವುಗಳನ್ನು ಹಾಜರುಪಡಿಸಲು ತೊಂದರೆ ಇಲ್ಲ. ಮೃತದೇಹವನ್ನು ಅಂತ್ಯಸಂಸ್ಕಾರ ಮಾಡಿದ ಬಗ್ಗೆ ದಾಖಲಾತಿಗಳು ಇದ್ದು, ಅವುಗಳನ್ನು ಹಾಜರುಪಡಿಸಲು ತೊಂದರೆ ಇಲ್ಲ. ಮಾಸ್ಟರ್ ಸಾಗರ್ ನನ್ನ ಮಗ ಆಗಿರುವುದಾಗಿ ಹಾಗೂ ಪರಿಹಾರ ಬೇಕೆಂದು ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 8 ರಲ್ಲಿ ಇರುವ ಹೆಸರು ನನ್ನದಲ್ಲ ಎಂದರೆ ಸರಿಯಲ್ಲ. ಗುರುಮೂರ್ತಿ ಮತ್ತು ನನ್ನ ನಡುವೆ ಗಂಡ-ಹೆಂಡತಿ ಸಂಬಂಧ ಇರಲಿಲ್ಲ ಎಂದರೆ ಸರಿಯಲ್ಲ. ಮೃತನ ದೇಹವನ್ನು ಪಡೆದ ಬಗ್ಗೆ ಹಾಗೂ ಅಂತ್ಯಸಂಸ್ಕಾರ ಮಾಡಿದ ಬಗ್ಗೆ ದಾಖಲಾತಿಗಳು ಇಲ್ಲದೇ ಇದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ. ಅಪಘಾತದ ಬಗ್ಗೆ ನಾನು ಠಾಣೆಯಲ್ಲಿ ಹೇಳಿಕೆ ನೀಡಿದ್ದು, ಸದರಿ ಹೇಳಿಕೆಯ ಪ್ರತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ನಾನು ಹೇಳಿದ ರೀತಿ

ಅಪಘಾತವಾಗಿದ್ದರೆ ಆಪಾದಿತ ವಾಹನಕ್ಕೆ ಜಖಂ ಆಗುತ್ತಿತ್ತು ಎಂದರೆ ಸರಿಯಲ್ಲ. ನಾನು ಹೇಳುವಂತೆ ಆಪಾದಿತ ವಾಹನದಿಂದ ಅಪಘಾತ ಸಂಭವಿಸಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಪೊಲೀಸರೊಂದಿಗೆ ಶಾಮೀಲಾಗಿ ದಾಖಲಾತಿಗಳನ್ನು ಸೃಷ್ಟಿ ಮಾಡಿ ಆಪಾದಿತ ವಾಹನ ಭಾಗಿಯಾಗದೇ ಇದ್ದರೂ ಸಹ ಅದರ ವಿರುದ್ದ ಸುಳ್ಳು ದೂರು ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನಾನು ಗಾರ್ಮೆಂಟ್ಸ್ ನಲ್ಲಿ ಕೆಲಸ ಮಾಡುತ್ತಿದ್ದು, ತಿಂಗಳಿಗೆ ರೂ.6,000/- ಸಂಬಳ ಬರುತ್ತದೆ.

1ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲನ್ನು ಮುಂದೂಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**